# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಚಾಮರಾಜನಗರ ಜಿಲ್ಲೆ ಕೊಳ್ಳೇಗಾಲ ಪಟ್ಟಣದ ಸಮಗ್ರಾಭಿವೃದ್ಧಿ ಯೋಜನೆಗೆ ನಕ್ಷೆ ಹಾಗೂ ವರದಿಯನ್ನು ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡುವ ಬಗ್ಗೆ.

---

ಓದಲಾಗಿದೆ:-

1) ಸರ್ಕಾರಿ ಆದೇಶ ಸಂಖ್ಯೆ:ನಅಇ 398 ಬೆಮಪ 97, ದಿ:21-01-1998.
2) ಮುಖ್ಯಾಧಿಕಾರಿ, ಪುರಸಭೆ ಯೋಜನಾ ಪ್ರಾಧಿಕಾರ, ಕೊಳ್ಳೇಗಾಲ ಇವರ ಪತ್ರದ ಸಂಖ್ಯೆ:ಪ್ರಯೋ.ಪ್ರಾ.ಕೊಳ್ಳೇ.ಅ.ಸಮ.ಅ.ಯೋ:1:99-2000 ದಿನಾಂಕ 04-12-1999.
3) ನಗರ ಯೋಜನಾ ನಿರ್ದೇಶಕರು, ಇವರ ಪತ್ರ ಸಂಖ್ಯೆ:ನಯೋ:ಉನಿ:ಕೇಕಾ:ಕೊಳ್ಳೇಗಾಲ:ಸಮಗ್ರಅಯೋ:99-2000 ದಿ:14-01-2000.

ಪ್ರಸ್ತಾವನೆ:

ಮೇಲೆ ಓದಲಾದ (1) ರ ಸರ್ಕಾರದ ಆದೇಶದಲ್ಲಿ ಚಾಮರಾಜನಗರ ಜಿಲ್ಲೆ, ಕೊಳ್ಳೇಗಾಲ ಪಟ್ಟಣದ ಸಮಗ್ರಾಭಿವೃದ್ಧಿ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ ಕಲಂ 13 (1) ರನ್ವಯ ಸರ್ಕಾರವು ತಾತ್ಕಾಲಿಕ ಅನುಮೋದನೆಯನ್ನು ನೀಡಿ, ಸಮಗ್ರಾಭಿವೃದ್ಧಿ ಯೋಜನೆಗೆ ತಾತ್ಕಾಲಿಕವಾಗಿ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ಎಲ್ಲಾ ನಕಾಶೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಮೇಲೆ ಓದಲಾದ (2) ರ ಪತ್ರದಲ್ಲಿ, ಮುಖ್ಯಾಧಿಕಾರಿ, ಪುರಸಭೆ ಯೋಜನಾ ಪ್ರಾಧಿಕಾರ, ಕೊಳ್ಳೇಗಾಲ ಇವರು ನಗರ ಯೋಜನಾ ನಿರ್ದೇಶಕರು, ಬೆಂಗಳೂರು ಇವರ ಮುಖಾಂತರ ಕೊಳ್ಳೇಗಾಲ ಪಟ್ಟಣದ ಸಮಗ್ರಾಭಿವೃದ್ಧಿ ಯೋಜನೆಯನ್ನು ವರದಿ ಸಹಿತ ಸರ್ಕಾರದ ಅಂತಿಮ ಅನುಮೋದನೆಗಾಗಿ ಕಳುಹಿಸಿರುತ್ತಾರೆ.

ಮೇಲೆ ಓದಲಾದ (3) ರ ಪತ್ರದಲ್ಲಿ, ನಗರ ಯೋಜನಾ ನಿರ್ದೇಶಕರು, ಬೆಂಗಳೂರು, ಇವರು ಕೊಳ್ಳೇಗಾಲ ಪಟ್ಟಣದ ಸಮಗ್ರಾಭಿವೃದ್ಧಿ ಯೋಜನೆಯನ್ನು 2011ನೇ ಇಸವಿಗೆ ತಯಾರಿಸಲಾಗಿದ್ದು, ಈ ಅವಧಿಯಲ್ಲಿ ಜನಸಂಖ್ಯೆಯನ್ನು 88,000 ಎಂದು ಅಂದಾಜು ಮಾಡಲಾಗಿದೆ. ಯೋಜನೆಯಲ್ಲಿ ಅಭಿವೃದ್ಧಿಗಾಗಿ ಒಟ್ಟು 924.00 ಹೆಕ್ಟೇರ್ ಪ್ರದೇಶ ಬೇಕಾಗುವುದೆಂದು, ಈ ವಿಸ್ತೀರ್ಣದಲ್ಲಿ 465.84 ಹೆಕ್ಟೇರ್ (ಶೇ.50.41) ಪ್ರದೇಶವನ್ನು ವಸತಿಗಾಗಿ, ವಾಣಿಜ್ಯಕ್ಕಾಗಿ 73.20 ಹೆಕ್ಟೇರ್ (ಶೇ:7.92), ಕೈಗಾರಿಕೆಗಾಗಿ 51.39 ಹೆಕ್ಟೇರ್ (ಶೇ.5.56) ಪ್ರದೇಶವನ್ನು ಕಾಯ್ದಿರಿಸಲಾಗಿದೆ. ಜೊತೆಗೆ ಇನ್ನಿತರ ಅಗತ್ಯ ನಾಗರೀಕ ಸೌಲಭ್ಯಗಳಿಗೆ ಹಾಗೂ ಬಯಲು ಜಾಗಗಳಿಗೆ ಪಟ್ಟಣದ ಬೆಳವಣಿಗೆಯ ಅಗತ್ಯಕ್ಕೆ ಅನುಗುಣವಾಗಿ ಸೂಕ್ತ ಪ್ರದೇಶಗಳನ್ನು ಕಾಯ್ದಿರಿಸಲಾಗಿದೆ. ಮುಖ್ಯ ರಸ್ತೆಗಳನ್ನು ವಿಸ್ತರಿಸಲು ಅನುಕೂಲವಾಗುವಂತೆ ಕಟ್ಟಡ ರೇಖೆಗಳನ್ನು ನಿಗದಿಪಡಿಸಲಾಗಿದೆ. ಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಾದ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದೆ. ಸಮಗ್ರಾಭಿವೃದ್ಧಿ ಯೋಜನೆ ನಕ್ಷೆ ಹಾಗೂ ವರದಿಗಳನ್ನು ಸಾಮಾನ್ಯವಾಗಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯಿದೆಯ ಪರಿಚ್ಛೇದ-12 ರಲ್ಲಿ ನಿರೂಪಿಸಿರುವ ಅಂಶಗಳನ್ನು ಅನುಸರಿಸಿ ಅಂತಿಮವಾಗಿ ತಯಾರಿಸಿರುವುದನ್ನು ಗಮನಿಸಿದ್ದು, ಈ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯಿದೆಯ ಪರಿಚ್ಛೇದ 13 (3) ರ ಪ್ರಕಾರ ಅಂತಿಮ ಅನುಮೋದನೆಯನ್ನು ನೀಡುವಂತೆ ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಸರ್ಕಾರಿ ಆದೇಶ ಸಂ:ನಅಇ 41 ಬೆಮಪ 2000, ಬೆಂಗಳೂರು, ದಿನಾಂಕ 24-03-2000.

ಚಾಮರಾಜನಗರ ಜಿಲ್ಲೆ, ಕೊಳ್ಳೇಗಾಲ ಪಟ್ಟಣದ ಸಮಗ್ರಾಭಿವೃದ್ಧಿ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯಿದೆಯ ಪರಿಚ್ಛೇದ 13(3) ರನ್ವಯ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡಿದೆ.

ಸಹಾಯಕ ನಿರ್ದೇಶಕರು
ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ
ಚಾಮರಾಜನಗರ

ಸಮಗ್ರಾಭಿವೃದ್ಧಿ ಯೋಜನೆಗೆ ಅಂತಿಮವಾಗಿ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ಎಲ್ಲಾ ನಕಾಶೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಅಹ್ಮದ್ ಎ.ಮುಜುಮ್ದರ್),
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

24/3

ಇವರಿಗೆ

1) ನಗರ ಯೋಜನಾ ನಿರ್ದೇಶಕರು, ಬೆಂಗಳೂರು,
2) ಮುಖ್ಯಾಧಿಕಾರಿ, ಪುರಸಭೆ ಯೋಜನಾ ಪ್ರಾಧಿಕಾರ, ಕೊಳ್ಳೇಗಾಲ,
3) ಮಾನ್ಯ ನಗರಾಭಿವೃದ್ಧಿ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು,
4) ವಾರದ ಗೆಜೆಟ್ : ರಕ್ಷಾ ಕಡತ : ಬಿಡಿ ಪ್ರತಿಗಳು.

ಸಹಾಯಕ ನಿರ್ದೇಶಕರು
ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ
ಚಾಮರಾಜನಗರ